# Visit of the Prime Minister of Denmark to India (October 9-11, 2021)

October 05, 2021

---

**ಭಾರತಕ್ಕೆ ಡೆನ್ಮಾರ್ಕ್ ಪ್ರಧಾನಿಯ ಭೇಟಿ (ಅಕ್ಟೋಬರ್ 9-11, 2021)**

ಅಕ್ಟೋಬರ್ 05, 2021

ಡೆನ್ಮಾರ್ಕ್ ಪ್ರಧಾನ ಮಂತ್ರಿ ಘನತೆವೆತ್ತ ಶ್ರೀಮತಿ ಮೆಟ್ಟೆ ಫ್ರೆಡೆರಿಕ್ಸೆನ್ ರವರು 9-11 ಅಕ್ಟೋಬರ್ 2021 ರಂದು ಭಾರತಕ್ಕೆ ಭೇಟಿ ನೀಡಲಿದ್ದಾರೆ.

2. ಭೇಟಿಯ ಸಮಯದಲ್ಲಿ, ಘನತೆವೆತ್ತ ಶ್ರೀಮತಿ ಮೆಟ್ಟೆ ಫ್ರೆಡೆರಿಕ್ಸೆನ್ ಭಾರತದ ರಾಷ್ಟ್ರಪತಿಯನ್ನು ಭೇಟಿಯಾಗಿ ಪ್ರಧಾನಿಯವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸುತ್ತಾರೆ. ಅವರು ಚಿಂತಕರ ಚಾವಡಿಗಳು, ವಿದ್ಯಾರ್ಥಿಗಳು ಮತ್ತು ನಾಗರಿಕ ಸಮಾಜದ ಸದಸ್ಯರೊಂದಿಗೆ ಸಂವಹನ ನಡೆಸುತ್ತಾರೆ.

3. ಭಾರತ-ಡೆನ್ಮಾರ್ಕ್ ದ್ವಿಪಕ್ಷೀಯ ಸಂಬಂಧಗಳು ನಿಯಮಿತ ಉನ್ನತ ಮಟ್ಟದ ವಿನಿಮಯಗಳಿಂದ ಗುರುತಿಸಲ್ಪಡುತ್ತವೆ ಮತ್ತು ಐತಿಹಾಸಿಕ ನಂಟು, ಸಾಮಾನ್ಯ ಪ್ರಜಾಸತ್ತಾತ್ಮಕ ಸಂಪ್ರದಾಯಗಳು ಮತ್ತು ಪ್ರಾದೇಶಿಕ ಹಾಗೂ ಅಂತಾರಾಷ್ಟ್ರೀಯ ಶಾಂತಿ ಮತ್ತು ಸ್ಥಿರತೆಯ ಹಂಚಿಕೆಯ ಆಶಯಯನ್ನು ಆಧರಿಸಿವೆ.

4. 28 ಸೆಪ್ಟೆಂಬರ್ 2020 ರಂದು ನಡೆದ ವರ್ಚುವಲ್ ಶೃಂಗಸಭೆಯಲ್ಲಿ, ಭಾರತ ಮತ್ತು ಡೆನ್ಮಾರ್ಕ್ 'ಹಸಿರು ಕಾರ್ಯತಂತ್ರದ ಪಾಲುದಾರಿಕೆಯನ್ನು' ಸ್ಥಾಪಿಸಿವೆ. ಘನತೆವೆತ್ತ ಶ್ರೀಮತಿ ಮೆಟ್ಟೆ ಫ್ರೆಡೆರಿಕ್‌ಸೆನ್ ರವರ ಭೇಟಿ ಎರಡೂ ಪಕ್ಷಗಳಿಗೆ ದ್ವಿಪಕ್ಷೀಯ ಸಂಬಂಧಗಳ ಸಂಪೂರ್ಣ ಹರವು ಕುರಿತು ಚರ್ಚಿಸಲು ಮತ್ತು 'ಹಸಿರು ಕಾರ್ಯತಂತ್ರದ ಪಾಲುದಾರಿಕೆ' ಅನುಷ್ಠಾನದ ಪ್ರಗತಿಯನ್ನು ಪರಿಶೀಲಿಸಲು ಅವಕಾಶ ನೀಡುತ್ತದೆ. ಎರಡೂ ಕಡೆಯವರು ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಬಹುಪಕ್ಷೀಯ ಸಮಸ್ಯೆಗಳನ್ನು ಚರ್ಚಿಸುತ್ತಾರೆ.

5. ಭಾರತ ಮತ್ತು ಡೆನ್ಮಾರ್ಕ್ ಬಲವಾದ ವ್ಯಾಪಾರ ಮತ್ತು ಹೂಡಿಕೆ ಸಂಬಂಧಗಳನ್ನು ಹೊಂದಿವೆ. 200 ಕ್ಕೂ ಹೆಚ್ಚು ಡ್ಯಾನಿಶ್ ಕಂಪನಿಗಳು ಭಾರತದಲ್ಲಿವೆ ಮತ್ತು 60 ಕ್ಕೂ ಹೆಚ್ಚು ಭಾರತೀಯ ಕಂಪನಿಗಳು ಡೆನ್ಮಾರ್ಕ್‌ನಲ್ಲಿವೆ. ನವೀಕರಿಸಬಹುದಾದ ಇಂಧನ, ಶುದ್ಧ ತಂತ್ರಜ್ಞಾನಗಳು, ನೀರು ಮತ್ತು ತ್ಯಾಜ್ಯ ನಿರ್ವಹಣೆ, ಕೃಷಿ ಮತ್ತು ಪಶುಸಂಗೋಪನೆ, ವಿಜ್ಞಾನ ಮತ್ತು ತಂತ್ರಜ್ಞಾನ, ಐಸಿಟಿ ಸೇರಿದಂತೆ ಸ್ಮಾರ್ಟ್ ಡಿಜಿಟಲೀಕರಣ, ಸ್ಮಾರ್ಟ್ ಸಿಟಿಗಳು, ಶಿಪ್ಪಿಂಗ್ ಇತ್ಯಾದಿ ಕ್ಷೇತ್ರಗಳಲ್ಲಿ ಬಲವಾದ ಸಹಯೋಗವಿದೆ.

6. ಈ ಭೇಟಿ ಭಾರತ ಮತ್ತು ಡೆನ್ಮಾರ್ಕ್ ನಡುವಿನ ನಿಕಟ ಮತ್ತು ಸ್ನೇಹ ಸಂಬಂಧವನ್ನು ಮತ್ತಷ್ಟು ಬಲಪಡಿಸುವ ಮತ್ತು ಹೆಚ್ಚಿಸುವ ನಿರೀಕ್ಷೆಯಿದೆ

**ನವ ದೆಹಲಿ**
**ಅಕ್ಟೋಬರ್ 5, 2021**

DISCLAIMER: This is an approximate translation. The original is available in English on MEA’s website and may be referred to as the official press release.